20.	ಜವಾಹರ್ ರೋಜಗಾರ ಯೋಜನೆ (ಎರಡನೇ ವಾಹನಿ)	70.00	67.858

ಸರ್ಕಾರಿ ಆಸ್ಪತ್ರೆಯಲ್ಲಿ ಗೈರುಹಾಜರಾಗಿರುವವರ ಕುರಿತು

907 - ಶ್ರೀ ಎನ್. ರಾಜಣ್ಣ (ಭಾರತಿ ನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರಿ ಆಸ್ಪತ್ರೆಯಲ್ಲಿ ಗೈರು ಹಾಜರಾಗಿರುವ ವೈದ್ಯರುಗಳ ತಜ್ಞರುಗಳ ಸಂಖ್ಯೆ ಮತ್ತು ಹೊರ ದೇಶಗಳಲ್ಲಿ ಕೆಲಸ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು?

ಆ) ಇವರುಗಳ ಮೇಲೆ ಕ್ರಮ ಜರುಗಿಸುವ ಬಗ್ಗೆ ತೆಗೆದುಕೊಂಡ ಕ್ರಮವೇನು?

ಡಾ: ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) 61 ಮಂದಿ ವೈದ್ಯಾಧಿಕಾರಿಗಳು. ದೀರ್ಘಕಾಲದಿಂದ ಅನಧಿಕೃತ ಗೈರುಹಾಜರಿಯಾಗಿರುತ್ತಾರೆ. ಇವರುಗಳು ಹೊರ ದೇಶಗಳಲ್ಲಿ ಇರುವ ಬಗ್ಗೆ ವಿವರವಿಲ್ಲ.

ಆ) ಇವರುಗಳ ಮೇಲೆ ಶಿಸ್ತಿನ ಕ್ರಮ ಜರುಗಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಕಮಲಾಪುರ ಮತ ಕ್ಷೇತ್ರದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣಕ್ಕೆ ಇರುವ ಸೌಲಭ್ಯ

911 - ಶ್ರೀ ರೇವುನಾಯಕ್ ಬೆಳಮಗಿ (ಕಮಲಾಪುರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.?

ಅ) ಕಮಲಾಪುರ ಮತ ಕ್ಷೇತ್ರದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣಕ್ಕೆ ಇರುವ ಸೌಲಭ್ಯಗಳೇನು; ಸಾಕಷ್ಟು ಶಿಕ್ಷಕರ ನೇಮಕಾತಿ ಆಗಿದೆಯೇ?

ಆ) ಖಾಲಿ ಇರುವ ಶಿಕ್ಷಕರ ಹುದ್ದೆಗಳು ಎಷ್ಟು ಹಾಗಿದ್ದಲ್ಲಿ ಸದರಿ ಹುದ್ದೆಗಳಿಗೆ ನೇಮಕ ಯಾವಾಗ ಮಾಡಲಾಗುವುದು?

ಇ) ಇದುವರೆಗೂ ಶಿಕ್ಷಕರ ಕೊರತೆ ಇದ್ದದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಈ ಎಲ್ಲಾ ಶಿಕ್ಷಣ ಸಂಸ್ಥೆಗಳಿಗೂ ಸ್ವಂತ ಕಟ್ಟಡ ಸೌಲಭ್ಯ ಇದೆಯೇ, ಕಟ್ಟಡ ಕೊರತೆ ಇರುವ ಶಾಲೆಗಳ ಸಂಖ್ಯೆ ಎಷ್ಟು?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಕಮಲಾಪುರ ಮತ ಕ್ಷೇತ್ರದಲ್ಲಿ 138 ಸರ್ಕಾರಿ ಪ್ರಾಥಮಿಕ ಶಾಲೆಗಳಿದ್ದು 517 ಶಿಕ್ಷಕರ ನೇಮಕ ಮಾಡಲಾಗಿದ್ದು, 137 ಶಾಲಾ ಕಟ್ಟಡ ಒದಗಿಸಲಾಗಿದೆ. 30,750 ವಿದ್ಯಾರ್ಥಿಗಳು ವ್ಯಾಸಾಂಗ ಮಾಡುತ್ತಿರುವರು. 517 ಶಿಕ್ಷಕರ ನೇಮಕ ಮಾಡಿದ್ದು ಪ್ರಾಥಮಿಕ ಶಾಲೆಯಲ್ಲಿ ಕೇವಲ 18 ಶಿಕ್ಷಕರ ಹುದ್ದೆ ಮಾತ್ರ ಖಾಲಿ ಇರುತ್ತದೆ. 1994ನೇ ಸಾಲಿನಲ್ಲಿ 15 ಪ್ರೌಢ ಶಾಲಾ ಶಿಕ್ಷಕರನ್ನು ನೇಮಕ ಮಾಡಲಾಗಿದೆ.